# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

### ವಾರ್ಡ್ ನಂ.70 :ರಾಜಗೋಪಾಲನಗರ

**ದಿನಾಂಕ: 17.04.2021 ರಂದು ಬೆಳಿಗ್ಗೆ 11.00 ಗಂಟೆಗೆ ಶ್ರೀಮತಿ ಕಮಲ ಹೆಚ್ ನೋಡಲ್ ಅಧಿಕಾರಿ, ವಾರ್ಡ್ 70ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀಮತಿ ಕಮಲ ಹೆಚ್ | ನೋಡಲ್‌ಅಧಿಕಾರಿ–ವಾರ್ಡ್ ನಂ.70 |
| 2 | ಶ್ರೀ ಹೇಮಂತ್‌ಕುಮಾರ್‌ಎಸ್ ಕೆ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು–ವಾರ್ಡ್ 70 |
| 3 | ಕೆ.ಶಿವಲಿಂಗಯ್ಯ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.70 |
| 4 | ಎನ್ ವೆಂಕಟೇಶ್ | ಕಂದಾಯ ಮೌಲ್ಯ ಮಾಪಕರು |
| 5 | ತ್ರಿವೇಣಿ | ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.70 |
| 6 | ಪ್ರವೀಣ್ ರಾಜ್ ಎನ್ | ಮಾರ್ಷಲ್ |
| 7 | ಸಿ ಎಸ್ ದಯಾನಂದ | ರಾಜಗೋಪಾಲನಗರ ಆರಕ್ಷಕ ಸಿಬ್ಬಂದಿ |
| 8 | ವಿಠ್ಠಲ್ ಹಟ್ಟಿ | ರಾಜಗೋಪಾಲನಗರ ಆರಕ್ಷಕ ಸಿಬ್ಬಂದಿ |
| 9 | ಮಂಗಳಮ್ಮ ಬಿ ಜಿ | ಲಿಂಕ್ ವರ್ಕರ್ |
| 10 | ಮಮತ ಆರ್ | ಲಿಂಕ್ ವರ್ಕರ್ |
| 11 | ಬಿ ಶಿವಶಂಕರ್ | ಸಾರ್ವಜನಿಕರು |
| 12 | ವಿ ನಾಗೇಶ್ | ಸಾರ್ವಜನಿಕರು |
| 13 | ಮಹದೇವ್ | ಬೀದಿದೀಪಗಳ ನಿರ್ವಹಣೆಯ ಗುತ್ತಿಗೆದಾರರು |

## :ನಡಾವಳಿಯ ವರದಿ:

ಸದಸ್ಯ ಕಾರ್ಯದರ್ಶಿಗಳಾದ ಶ್ರೀ ಹೇಮಂತ್‌ಕುಮಾರ್‌ಎಸ್ ಕೆ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತಕೋರಿದರು.

- ಶ್ರೀಮತಿ ಕಮಲ ಹೆಚ್, ನೋಡಲ್ ಅಧಿಕಾರಿರವರು ಮಾತನಾಡಿ ಒಂದು ವಾರದಿಂದ ಕೋವಿಡ್ ಸೋಂಕು ಉಲ್ಬಣಿಸಿದ್ದು, ಜನರು ಗುಂಪು ಗುಂಪಾಗಿ ಸೇರುವ ಕಡೆಗಳಾದ, ಹೋಟೆಲ್, ಅಂಗಡಿಗಳು, ದೇವಸ್ಥಾನ ಇನ್ನಿತರ ತಾಣಗಳಲ್ಲಿ ಸಾರ್ವಜನಿಕರಲ್ಲಿ ಸಾಮಾಜಿಕ ಅಂತರ ಕಾಯ್ದುಕೊಳ್ಳುವ ಹಾಗೂ ಮಾಸ್ಕ್ ಧರಿಸುವ ಬಗ್ಗೆ ಅರಿವು ಮೂಡಿಸುವಂತೆ, ಲಸಿಕೆ ಹಾಕಿಸಿಕೊಳ್ಳಲು ಜಾಗೃತಿ ಮೂಡಿಸುವಂತೆ ತಿಳಿಸಿದರು.
  - ಕೆ.ಶಿವಲಿಂಗಯ್ಯ, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.70ರವರು ಮಾತನಾಡಿ ವಾರ್ಡ್ 70ರ ವ್ಯಾಪ್ತಿಯಲ್ಲಿ ಇದುವರೆಗೂ ಒಟ್ಟು 224 ಮಂದಿಗೆ ಲಸಿಕೆ ಹಾಕಲಾಗಿದ್ದು, ಪ್ರತಿ ದಿನ 180-200 ಟೆಸ್ಟ್ ನಡೆಸಲಾಗಿದ್ದು, ಈವರೆಗೂ ಒಟ್ಟು 51 ಸಕ್ರಿಯ ಪ್ರಕರಣಗಳು ಕಂಡು ಬಂದಿದ್ದು, ಅವುಗಳಲಿ 45 ಮಂದಿ ಮನೆಯಲ್ಲೆ ಕ್ವಾರಂಟೈನ್ ಆಗಿದ್ದು, ಇನ್ನುಳಿದ ಆರು ಮಂದಿ ಆಸ್ಪತ್ರೆಯಲ್ಲಿರುವುದಾಗಿ ತಿಳಿಸಿದರು ಹಾಗೂ ಸ್ವಚ್ಛತೆ ಹಾಗೂ ಸಾಮಾಜಿಕ ಅಂತರ ಕಾಯ್ದುಕೊಳ್ಳುವ ಬಗ್ಗೆ ಅರಿವು ಮೂಡಿಸಲಾಗಿದೆ ಎಂದು ತಿಳಿಸಿದರು.

- <u>ಸ್ವಚ್ಛತೆ ಮತ್ತು ಘನ ತ್ಯಾಜ್ಯ ನಿರ್ವಹಣೆ ಬಗ್ಗೆ:</u>
  - ಶಿವಲಿಂಗಯ್ಯ.ಕೆ, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.70ರವರು ಮಾತಾನಾಡಿ ವಾರ್ಡ್ 70ರ ವ್ಯಾಪ್ತಿಯಲ್ಲಿ ದಿನಾಂಕ:01/04/2021 ರಿಂದ 15/04/2021 ರವರೆಗೆ 23 ಮಂದಿ ಮಾಸ್ಕ್ ಧರಿಸದವರಿಂದ ರೂ.5750/-ಗಳ ದಂಡವನ್ನು ಸಂಗ್ರಹಿಸಲಾಗಿದೆ, ಕಸವನ್ನು ಎಲ್ಲೆಂದರಲ್ಲಿ ಸುರಿಯುವವರಿಂದ ರೂ3950/-ಗಳ ದಂಡವನ್ನು ಸಂಗ್ರಹಿಸಲಾಗಿದೆ ಹಾಗೂ ಮಾಸ್ಕ್ ಧರಿಸಲು ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಗಿದೆ ಎಂದು ತಿಳಿಸಿದರು.
  - ಶಿವಲಿಂಗಯ್ಯ.ಕೆ, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.70ರವರು ಮಾತಾನಾಡಿ ವಾರ್ಡ್ 70ರ ವ್ಯಾಪ್ತಿಯಲ್ಲಿ ಮನೆಗಳು ಹೆಚ್ಚಿದ್ದು, ಇತ್ತಿಚೆಗೆ ಸರ್ವೇಕಾರ್ಯವು ಸಹ ನಡೆದಿದ್ದು, ಹಾಲಿ ನಿರ್ವಹಿಸುತ್ತಿರುವ 31 ಆಟೋಗಳ ಜೊತೆಗೆ ಇನ್ನು 2 ಎರಡೂ ಆಟೋಗಳು ಹೆಚ್ಚುವರಿಯಾಗಿ ಬೇಕಾಗಿದ್ದು, ಒದಗಿಸಿಕೊಡಲು ಕೋರಿದರು.
    - ಶ್ರೀಮತಿ ಕಮಲ ಹೆಚ್, ನೋಡಲ್ ಅಧಿಕಾರಿರವರು ಮಾತನಾಡಿ ಸರ್ವೇಕಾರ್ಯ ನಡೆಸಿದ ಪ್ರತಿಗಳೊಂದಿಗೆ ಮೇಲಾಧಿಕಾರಿಗಳಿಗೆ ಪ್ರಸ್ತಾವನೆ ಸಲ್ಲಿಸಲು ಸೂಚಿಸಿದರು.
  - ಶಿವಲಿಂಗಯ್ಯ.ಕೆ, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.70ರವರು ಮಾತಾನಾಡಿ ಬ್ಲಾಕ್ ನಂ.9 & 29 ರಲ್ಲಿ ಕ್ರಮವಾಗಿ ಕಾಳಿಕಾ ದುರ್ಗಾ ಪರಮೇಶ್ವರಿ ಸಂಘ ಮತ್ತು ಕಾಳಿಕಾಂಭ ಸ್ತ್ರೀ ಶಕ್ತಿ ಸಂಘಗಳು ಸರಿಯಾಗಿ ಕಾರ್ಯನಿರ್ವಹಿಸುತ್ತಿಲ್ಲ ಎಂದು ತಿಳಿಸಿದರು.

- ಶ್ರೀಮತಿ ಕಮಲ ಹೆಚ್, ನೋಡಲ್ ಅಧಿಕಾರಿರವರು ಮಾತನಾಡಿ ಈ ಬಗ್ಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನ ತ್ಯಾಜ್ಯ ರವರ ಗಮನಕ್ಕೆ ತಂದು ಸದರಿಯವರಿಗೆ ನೋಟೀಸ್ ನೀಡುವಂತೆ ಸೂಚಿಸಿದರು.

- ಶ್ರೀಮತಿ ಕಮಲ ಹೆಚ್, ನೋಡಲ್ ಅಧಿಕಾರಿರವರು ಮಾತನಾಡಿ ವಾರ್ಡ್ 70ರ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರುಗಳಿಗೆ ಊಟವನ್ನು ಒದಗಿಸುವ ವಿಷಯವನ್ನು ಪ್ರಸ್ತಾಪಿಸಿದರು
  - ಇದಕ್ಕೆ ಶಿವಲಿಂಗಯ್ಯ.ಕೆ, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.70ರವರು ಪ್ರತಿಕ್ರಿಯಿಸಿ ಈಗಾಗಲೇ ಈ ವಿಚಾರವಾಗೀ ಪೌರಕಾರ್ಮಿಕರುಗಳೊಂದಿಗೆ ಚರ್ಚಿಸಲಾಗಿದ್ದು, ಇಸ್ಕಾನ್ & ಇಂದಿರಾ ಕ್ಯಾಂಟೀನ್ ಊಟವನ್ನು ಬಿಟ್ಟು ಬೇರೆ ವ್ಯವಸ್ಥೆ ಮಾಡುವಂತೆ ಪೌರಕಾರ್ಮಿಕರು ಅಭಿಪ್ರಾಯಿಸಿರುವುದನ್ನು ಸಭೆಗೆ ತಿಳಿಸಿದರು.

- **ಇನ್ನಿತರ ಸಮಸ್ಯೆಗಳ ಬಗ್ಗೆ**
  - ಶ್ರೀಮತಿ ಕಮಲ ಹೆಚ್, ನೋಡಲ್ ಅಧಿಕಾರಿರವರು ಮಾತನಾಡಿ ಜೂನ್ 5 ಪರಿಸರ ದಿನಾಚರಣೆಯ ಅಂಗವಾಗಿ 1000 ಗಿಡಗಳನ್ನು ನೆಡಲು ಉದ್ದೇಶಿಸಿದ್ದು, ಈ ಅಭಿಯಾನದಲ್ಲಿ ಎಲ್ಲಾ ಇಲಾಖೆಯ ಅಧಿಕಾರಿಗಳು ಕೈಜೋಡಿಸಲು ಕೋರಿದರು.
  - ಶ್ರೀಮತಿ ಕಮಲ ಹೆಚ್, ನೋಡಲ್ ಅಧಿಕಾರಿರವರು ಮಾತನಾಡಿ ಸಭೆಯಲ್ಲಿ ಹಾಜರಿದ್ದ ಕಂದಾಯ ಮೌಲ್ಯ ಮಾಪಕರು ಸರ್ಕಾರಿ ಖಾಲಿ ಜಾಗಗಳನ್ನು ಗುರುತಿಸಿಕೊಡಲು ತಹಶೀಲ್ದಾರ್‌ರವರಿಗೆ ಪತ್ರ ಬರೆಯುವಂತೆ ಸೂಚಿಸಿದರು ಹಾಗೂ ವಾರ್ಡ್ ನಂ.70ರ ವ್ಯಾಪ್ತಿಯ ಸರ್ವೇ ನಂಬರ್ 68, 119 & 120 ಈ ಸರ್ವೇ ನಂಬರ್‌ಗಳಲ್ಲಿ ಕಂದಾಯ ಕಟ್ಟಿಸಿಕೊಂಡು ಬಿ ಖಾತೆ ಕೊಡುವ ಸಂಬಂಧ ಪ್ರಸ್ತಾವನೆ ಸಲ್ಲಿಸಲು ಸೂಚಿಸಿದರು.

**BBMP SAHAYA APP:**

- ಹೇಮಂತ್‌ಕುಮಾರ್‌ಎಸ್.ಕೆ ಸಹಾಯಕ ಅಭಿಯಂತರರು, ವಾರ್ಡ್ ನಂ.70 ಮಾತನಾಡಿ ನಮ್ಮ ಇಲಾಖೆಗೆ ಸಂಬಂಧಪಟ್ಟ ದೂರುಗಳಿಗೆ ಶೀಘ್ರಗತಿಯಲ್ಲಿ ಪರಿಹಾರಕ್ರಮ ಕೈಗೊಳ್ಳುತ್ತಿದ್ದು, ಯಾವುದೇ ಸಮಸ್ಯೆಗಳು ಬಾಕಿ ಇರುವುದಿಲ್ಲ ಎಂದು ತಿಳಿಸಿದರು.
- ಶಿವಲಿಂಗಯ್ಯ.ಕೆ, ಹಿರಿಯ ಆರೋಗ್ಯ ಪರಿವೀಕ್ಷಕರು, ಮಾತನಾಡಿ ಘನ ತ್ಯಾಜ್ಯ ನಿರ್ವಹಣೆಗೆ ಸಂಬಂಧಪಟ್ಟ ದೂರುಗಳನ್ನು ಪರಿಹರಿಸಲಾಗಿದೆ ಹಾಗೂ ಯಾವುದೇ ಸಮಸ್ಯೆ ಬಾಕಿ ಇರುವುದಿಲ್ಲ ಎಂದು ತಿಳಿಸಿದರು.

- ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡಿನ ಕುಂದುಕೊರತೆಗಳತ್ತ ಗಮನಹರಿಸಿ ವಾರ್ಡ್ ಅಭಿವೃದ್ಧಿ ಪಡಿಸಲು ಸಹಕಾರ ನೀಡಬೇಕೆಂದು ಮನವಿ ಮಾಡಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಹೇಮಂತ್‌ಕುಮಾರ್ ಎಸ್ ಕೆ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ–ವಾರ್ಡ್ 70 ಹಾಗೂ
ಸಹಾಯಕ ಅಭಿಯಂತರರು,

H Kamala
(ಕಮಲ ಹೆಚ್)
ನೋಡಲ್ ಅಧಿಕಾರಿ ವಾರ್ಡ್–70

ಪ್ರತಿಯನ್ನು:

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರರವರ ಆದ್ಯ ಗಮನಕ್ಕೆ ತರಲಾಗಿದೆ.
2) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
4) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.70 ರವರ ಮಾಹಿತಿಗಾಗಿ
7) ಸಹಾಯಕ ಅಭಿಯಂತರರು (ವಿದ್ಯುತ್ ಬೆಸ್ಕಾಂ) ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
8) ಸಹಾಯಕ ಅಭಿಯಂತರರು (ವಿದ್ಯುತ್ (ಬೀದಿದೀಪ) ಬಿಬಿಎಂಪಿ ರವರ ಮಾಹಿತಿಗಾಗಿ ಸೂಕ್ತ ಕ್ರಮಕ್ಕಾಗಿ
9) ಕಛೇರಿ ಕಡತಕ್ಕೆ